# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂಃ 359/2015 ಸಿಡಬ್ಲೂ : 25 ಪಿಡಬ್ಲೂಃ 4

ಪ್ರಮಾಣವಚನ ಬೋಧಿಸಲಾಯಿತು ದಿಃ 12-12-2025

ಹೆಸರು : ಪರಸಪ್ಪ ವನಂಜಕರ್

ತಂದೆ ಹೆಸರು : ಶಿವಪ್ಪ ವನಂಜಕರ್

ವಯಸ್ಸು : 53 ವರ್ಷ

ಉದ್ಯೋಗ : ಪಿ ಐ, ಸಿ ಇ ಎನ್, ಪಿ ಎಸ್ ಕಲಬುರಗಿ

ವಾಸಸ್ಥಳ : ಕಲಬುರಗಿ

**: ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ನಾನು 10-12-2012 ರಿಂದ 25-08-2014 ರವರೆಗೆ ಸಹೇಡಂ ಪಿ ಎಸ್ ನಲ್ಲಿ ಪಿ ಎಸ್ ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ24-05-2014 ರಂದು ರಾತ್ರಿ 09.15 ಗಂಟೆಗೆ ಸೇಡಂ ಸರ್ಕಾರಿ ಆಸ್ಪತ್ರೆಯಿಂದ ಅಪಘಾತ ಎಂ ಎಲ್ ಸಿ ಇದೆ ಎಂದು ಮಾಹಿತಿ ತಿಳಿಸಿದ ಮೇರೆಗೆ ಆಸ್ಪತ್ರೆಗೆ ಭೇಟಿ ನೀಡಿ ಚಾ ಸಾ 1 ರವರ ಹೇಳಿಕೆಯನ್ನು ದಾಖಲಿಸಿರುತ್ತೆನೆ. ನಂತರ ಮರಳಿ ಠಾಣೆಗೆ ಬಂದು 10.30 ಗಂಟೆಗೆ ಸದರಿ ಹೇಳಿಕೆಯ ದೂರಿನ ಸಾರಾಂಶದ ಮೇರೆಗೆ ಠಾಣೆ ಗುನ್ನೆ ಸಂಖ್ಯೆ 121/2014 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರ ವ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಯು ಸದರಿ ದೂರನ್ನು ಈಗ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 1 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ಪಿ 1(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಪ್ರ ವ ವರದಿಯನ್ನು ನಿ ಪಿ 24 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ 24(ಎ) ಎಂದು ಗುರುತಿಸಲಾಯಿತು. ನಂತರ ಸದರಿ ಪ್ರಕರಣವನ್ನು ಗಂಭೀರ ಪ್ರಕರಣ ಆಗಿರುವುದರಿಂದ ಮುಂದಿನ ತನಿಖೆಗಾಗಿ ಕಡತವನ್ನು ಚಾ ಸಾ 26 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಪಾಟಿ ಸವಾಲುಃಆರೋಪಿ ಪರ ವಕೀಲರಿಂದಃ

ದಿಃ24-05-2014 ರಂದು ರಾತ್ರಿ 09.15 ಗಂಟೆಗೆ ಸೇಡಂ ಸರ್ಕಾರಿ ಆಸ್ಪತ್ರೆಯಿಂದ ಅಪಘಾತ ಎಂ ಎಲ್ ಸಿ ಇದೆ ಎಂದು ಮಾಹಿತಿ ತಿಳಿಸಿದ ಮೇರೆಗೆ ಆಸ್ಪತ್ರೆಗೆ ಭೇಟಿ ನೀಡಿ ಚಾ ಸಾ 1 ರವರ ಹೇಳಿಕೆಯನ್ನು ದಾಖಲಿಸಿರುತ್ತೆನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಮರಳಿ ಠಾಣೆಗೆ ಬಂದು 10.30 ಗಂಟೆಗೆ ಸದರಿ ಹೇಳಿಕೆಯ ದೂರಿನ ಸಾರಾಂಶದ ಮೇರೆಗೆ ಠಾಣೆ ಗುನ್ನೆ ಸಂಖ್ಯೆ 121/2014 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರ ವ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ.

(ಮರು ವಿಚಾರಣೆ ಇಲ್ಲ)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸರಿ ಇದೆ**

**ಪ್ರ. ದ. ನ್ಯಾ ದಂ. ಸೇಡಂ.**